ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1203 (1468)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ಮುಜರಾಯಿ ದೇವಾಲಯಗಳಲ್ಲಿ ಯಾತ್ರಾರ್ಥಿಗಳು ತಂಗುವ ವ್ಯವಸ್ಥೆ ಬಗ್ಗೆ

(ಅ) ರಾಜ್ಯದ ಮುಜರಾಯಿ ದೇವಸ್ಥಾನದಡಿ ಯಾತ್ರಾರ್ಥಿಗಳು ಉಳಿದುಕೊಳ್ಳಲು ಭವನಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಬೆಳಗಾವಿ ಜಿಲ್ಲೆಯ ಸವದತ್ತಿ ಯಲ್ಲಮ್ಮ, ಮಾಯಕ್ಕ ಚಿಂಚಲಿ, ಉತ್ತರ ಕನ್ನಡ ಜಿಲ್ಲೆಯ ಉಳವಿ ಚೆನ್ನಬಸವೇಶ್ವರ ಕ್ಷೇತ್ರಗಳಲ್ಲಿ ಯಾತ್ರಾರ್ಥಿಗಳ ವಾಸ್ತವ್ಯಕ್ಕಾಗಿ ಕರ್ನಾಟಕ ಭವನಗಳನ್ನು ನಿರ್ಮಿಸಲು ಸರ್ಕಾರ ಯೋಜನೆ ಹಮ್ಮಿಕೊಂಡಿದೆಯೇ ;

(ಇ) ನೆರೆ ರಾಜ್ಯದ ಜಿಲ್ಲೆಯಾದ ಸಾಂಗ್ಲಿಯ ಗುಡ್ಡಾಪೂರ, ದಾನಮ್ಮದೇವಿ, ಶ್ರೀಶೈಲದಲ್ಲಿರುವ ಮಲ್ಲಿಕಾರ್ಜುನ ದೇವಾಲಯ, ಆಂಧ್ರ ಪ್ರದೇಶದ ರಾಯಚೋಟಿ ವೀರಭದ್ರ ದೇವಸ್ಥಾನಗಳಲ್ಲಿ ಅಸಂಖ್ಯಾತ ಕರ್ನಾಟಕದ ಯಾತ್ರಾರ್ಥಿಗಳಿಗೆ ವಾಸ್ತವ್ಯಕ್ಕೆ ಅನಾನುಕೂಲತೆಯಾಗುತ್ತಿದ್ದು, ಇಂತಹ ಕಡೆಗಳಲ್ಲಿ ಕರ್ನಾಟಕ ಭವನ ನಿರ್ಮಿಸುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?